**ಪಿ.ಡಬ್ಲ್ಯು: 1**

**ಸಾಕ್ಷಿಯನ್ನು ಕರೆಸಿ ಪ್ರಮಾಣಿಕರಿಸಲಾಯಿತು.**

**ದಿನಾಂಕಃ** 08-11-2024

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಜಿ.ಎಂ.ಎಂ. ವಕೀಲರಿಂದಃ-**

ಈ ಪ್ರಕರಣದಲ್ಲಿ ನಾನು ಅರ್ಜಿದಾರನಾಗಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದೃಢೀಕೃತ ಪ್ರ.ವ. ವರದಿ, ಪಿರ್ಯಾದಿ ನಕಲು, ಘಟನಾ ಸ್ಥಳದ ಪಂಚನಾಮೆ ವರದಿ ಪ್ರತಿ, ಐ.ಎಂ.ವಿ. ವರದಿಯ ಪ್ರತಿ, ಚಾರ್ಜ್ ಶೀಟ್ ಪ್ರತಿ, ಸಿ.ಸಿ.ನಂ.429/2020 ರ ನ್ಯಾಯಾಲಯದ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದೇನೆ, ಅವುಗಳನ್ನು ನಿಪಿ-1 ರಿಂದ ನಿಪಿ-6 ಎಂದು ಗುರುತಿಸಲಾಯಿತು. ಒಂದು ಅಂಗನ್ಯೂನ್ಯತೆ ಪ್ರಮಾಣ ಪತ್ರ ಹಾಜರುಪಡಿಸಿದ್ದು, ಸದರಿ ದಾಖಲೆಯನ್ನು ಗುರುತಿಸಲು ಎದ್ರುದಾರರ ಪರ ವಕೀಲರು ತಕರಾರು ಮಾಡಿದ್ದು, ಆದ್ದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ-7 ಎಂದು ಗುರುತಿಸಲಾಯಿತು. ಗಾಯದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-8 ಎಂದು, ಒಂದು ಡಿಸ್ಚಾರ್ಜ್ ಸಮ್ಮರಿಯನ್ನು ಹಾಜರುಪಡಿಸಿದ್ದು ನಿಪಿ-9 ಎಂದು ಗುರುತಿಸಲಾಯಿತು. 6 ವೈದ್ಯಕೀಯ ವೆಚ್ಚ ರಶೀದಿಯನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ 10 ರಿಂದ 15 ಎಂದು ಗುರುತಿಸಲಾಯಿತು. 3 ಔಷಧಿ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ 16 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಅರ್ಜಿದಾರರ ಪರ ವಕೀಲರು ಮುಂದುವರಿದ ಮುಖ್ಯವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಪ್ರಕರಣ ಮುಂದೂಡಲಾಯಿತು.)

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

*Sd/-*

**ಮೆಂಬರ್ ಎಡಿಶನಲ್ ಎಂ.ಎ.ಸಿ.ಟಿ. ಮತ್ತು**
**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**